ತಯಾರಿಸಿದ ನಂತರ ಇದರಿಂದ ನೀರಾವರಿ ಸೌಲಭ್ಯ ಪಡೆಯುವ ಹಳ್ಳಿಗಳನ್ನು ಗುರುತಿಸಬಹುದಾಗಿದೆ.

ಶಿರೂರು ಡ್ಯಾಮ್ ಸಲುವಾಗಿ ರಸ್ತೆ ಪೂರ್ಣಗೊಳಿಸುವ ಬಗ್ಗೆ

349 - ಶ್ರೀ ಉಮೇಶ್ ವಿ.ಕತ್ತಿ (ಹುಕ್ಕೇಲಿ) : ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಶಿರೂರು ಡ್ಯಾಂ ಸಲುವಾಗಿ ಕಾಮಗಾರಿ ಪ್ರಾರಂಭಿಸಲು ರಸ್ತೆ ನಿರ್ಮಾಣ ಕಾರ್ಯ ಪ್ರಾರಂಭಿಸಿದ್ದನ್ನು ಅರಣ್ಯ ಇಲಾಖೆಯವರು ಅರ್ಧಕ್ಕೆ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ?

ಆ) ಹಾಗಿದ್ದಲ್ಲಿ, ನೀರಾವರಿ ಮತ್ತು ಅರಣ್ಯ ಇಲಾಖೆ ಮಧ್ಯೆ ಇರುವ ತಾರತಮ್ಯ ಸರಿಪಡಿಸಿ ಕಾಮಗಾರಿ ಪ್ರಾರಂಭಿಸಲು ಸರ್ಕಾರದವರು ಜರೂರು ಕ್ರಮ ಕೈಗೊಳ್ಳುವರೇ?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯ ಮಂತ್ರಿಗಳು) :

ಅ) ಬಂದಿದೆ.

ಆ) ಈ ಬಗ್ಗೆ ತುರ್ತು ಕ್ರಮ ಕೈಗೊಳ್ಳಲಾಗುತ್ತಿದೆ.

ಕೊಟಬಾಗಿ ಏತ ನೀರಾವರಿ ಯೋಜನೆ.

348 - ಶ್ರೀ ಉಮೇಶ್ ವಿ.ಕತ್ತಿ (ಹುಕ್ಕೇಲಿ) : ಮಾನ್ಯ ಉಪಮುಖ್ಯಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಕೊಟಬಾಗಿ ಏತ ನೀರಾವರಿ ಯೋಜನೆ ಮಂಜೂರು ಆಗಿದೆಯೆ;

ಆ) ಹಾಗಿದ್ದಲ್ಲಿ ಈ ಯೋಜನೆಯನ್ನು ಯಾವಾಗ ಪ್ರಾರಂಭಿಸಲಾಗುವುದು;

ಇ) ಈ ಯೋಜನೆಯಿಂದ ಹುಕ್ಕೇರಿ ತಾಲ್ಲೂಕಿನ ಯಾವ ಯಾವ ಹಳ್ಳಿಗಳ ಎಷ್ಟು ಎಷ್ಟು ಎಕರೆ ಜಮೀನುಗಳಿಗೆ ನೀರಿನ ಸೌಲಭ್ಯ ಕಲ್ಪಿಸಲಾಗುವುದು?

ಶ್ರೀ ಎಸ್.ಎಂ. ಕೃಷ್ಣ (ಉಪ ಮುಖ್ಯ ಮಂತ್ರಿಗಳು) :

ಅ) ಹುಕ್ಕೇರಿ ತಾಲ್ಲೂಕಿನ ಕೊಟಬಾಗಿ ಏತ ನೀರಾವರಿ ಯೋಜನೆಯನ್ನು, ಕೆಲ ನಿಬಂಧನೆಗಳೊಡನೆ, ಕೈಗೆತ್ತಿಕೊಳ್ಳಲು ಸರ್ಕಾರವು ದಿನಾಂಕ 31-10-92ರಂದು ಅನುಮೋದನೆ ನೀಡಿರುತ್ತದೆ.

ಆ) ಯೋಜನೆಗೆ ತಾಂತ್ರಿಕ ಸಮಿತಿಯ ಅನುಮೋದನೆ ದೊರೆತ ನಂತರ ಕಾಮಗಾರಿಗಳನ್ನು ಪ್ರಾರಂಭಿಸಲಾಗುವುದು.

ಇ) ಹುಕ್ಕೇರಿ ತಾಲ್ಲೂಕಿನ 13 ಗ್ರಾಮಗಳು ಮತ್ತು ಚಿಕ್ಕೋಡಿ ತಾಲ್ಲೂಕಿನ 11 ಗ್ರಾಮಗಳು ಈ ಏತ ನೀರಾವರಿ ಯೋಜನೆಯಿಂದ ಪ್ರಯೋಜನ ಪಡೆಯುತ್ತವೆ. ಯೋಜನೆಯ ಅನ್ವೇಷಣಾ ಕಾರ್ಯವು ಪ್ರಗತಿಯಲ್ಲಿದ್ದು, ಅದು ಮುಗಿದ ನಂತರ ಪ್ರತಿಯೊಂದು ಗ್ರಾಮದಲ್ಲಿ ನೀರಾವರಿ ಸೌಲಭ್ಯ ಪಡೆಯುವ ವಿಸ್ತೀರ್ಣದ ವಿವರ ತಿಳಿದುಬರುತ್ತದೆ.

ತುಮಕೂರು ಉಪನಾಲೆಯ ಬಳಿ ಬಾಗೂರು ನವಿಲೆ ಸುರಂಗದಿಂದ ಈಚೆಗೆ ಲಭ್ಯವಾಗಿರುವ ನೀರಿನ ಪ್ರಮಾಣ.

663 - ಶ್ರೀ ಗುರುಪಾದಪ್ಪ ನಾಗಮಾರಪಳ್ಳಿ (ಔರದ್) : ಮಾನ್ಯ ಉಪ ಮುಖ್ಯ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವಿರೆ?

ಅ) ಹೇಮಾವತಿ ಎಡದಂಡೆ ಯೋಜನೆಯ ತುಮಕೂರು ಉಪ ನಾಲೆಯ ಬಳಿಯ ಬಾಗೂರು ನವಿಲೆ ಸುರಂಗದಿಂದ ಈಚೆಗೆ ಲಭ್ಯವಾಗುವ ನೀರಿನ ಪ್ರಮಾಣವೆಷ್ಟು; (ತಾಲ್ಲೂಕುವಾರು ಅಂಕಿ ಅಂಶಗಳನ್ನು ಒದಗಿಸುವುದು);